## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2016-17ನೇ ಸಾಲಿನಲ್ಲಿ ರಾಷ್ಟ್ರೀಯ ಗ್ರಾಮೀಣ ಕುಡಿಯುವ ನೀರು ಯೋಜನೆಯಡಿ 2009 ರಿಂದ ಶಸನಬದ್ಧ ಕಡಿತಗಳ ಬಾಕಿ ಪಾವತಿಗಾಗಿ ಅನುದಾನವನ್ನು ರಾಜ್ಯ ಸರ್ಕಾರದಿಂದ ಬಿಡುಗಡೆ ಮಾಡುವ ಕುರಿತು.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂ.ಗ್ರಾಅಪ/203/ಗ್ರಾಕುನೀ&ನೈಇ/2015, ಬೆಂಗಳೂರು, ದಿನಾಂಕ 25-05-2016
2. ಸರ್ಕಾರದ ಆರ್ಥಿಕ ಇಲಾಖೆಯ ಸಹಮತಿ ಸಂ.ಆಇ/168/ವೆಚ್ಚ-6/2016, ಬೆಂಗಳೂರು, ದಿನಾಂಕ: 20-10-2016
3. ಸರ್ಕಾರದ ಆದೇಶ ಸಂ.ಗ್ರಾಅಪ/481/ಗ್ರಾಕುನೀ&ನೈಇ/2016, ಬೆಂಗಳೂರು, ದಿನಾಂಕ 20-12-2016

**ಪೀಠಿಕೆ:**

ಮೇಲೆ ಓದಲಾದ ಉಲ್ಲೇಖ (1) ರ ಸರ್ಕಾರದ ಆದೇಶದನ್ವಯ ರಾಷ್ಟ್ರೀಯ ಗ್ರಾಮೀಣ ಕುಡಿಯುವ ನೀರು ಯೋಜನೆಯಡಿ ಬಳಕೆಯಾಗದೆ ಬ್ಯಾಂಕಿನ ಖಾತೆಯಲ್ಲಿದ್ದ ರೂ.61204.12 ಲಕ್ಷಗಳ ಅನುದಾನವನ್ನು ಸಚಿವ ಸಂಪುಟದ ನಿರ್ಣಯದಂತೆ ಆರ್ಥಿಕ ಇಲಾಖೆಗೆ ಜಮೆ ಮಾಡಲಾಗಿರುತ್ತದೆ. ಈ ಹಿಂದೆ ಈಗಾಗಲೇ ರೂ.30600.00 ಲಕ್ಷಗಳ ಅನುದಾನವನ್ನು ಗ್ರಾಮೀಣ ಕುಡಿಯುವ ನೀರು ಯೋಜನೆಗಳಿಗೆ ಬಿಡುಗಡೆ ಮಾಡಲಾಗಿದ್ದು, ಪ್ರಸ್ತುತ ಉಳಿದ ರೂ.30600.00 ಲಕ್ಷಗಳ ಅನುದಾನವನ್ನು ಲೆಕ್ಕ ಶೀರ್ಷಿಕೆ 2215-01-102-9-08-132 (ಯೋಜನೆ) ಅಡಿ ರಾಜ್ಯದ ಪಾಲಾಗಿ ಬಿಡುಗಡೆ ಮಾಡಲು ಉಲ್ಲೇಖ (2) ರಲ್ಲಿ ಆರ್ಥಿಕ ಇಲಾಖೆಯು ಸಹಮತಿಸಿರುತ್ತದೆ. ಸದರಿ ಬಳಕೆಯಾಗದ ಅನುದಾನದಲ್ಲಿ 2009 ರಿಂದ ಸಂಬಂಧಿಸಿದ ಇಲಾಖೆ / ಗುತ್ತಿಗೆದಾರರಿಗೆ ಪಾವತಿಯಾಗದೆ ಇರುವ ಶಾಸನಬದ್ಧ (EMD, FSD, TDS, etc.) ಕಡಿತಗಳು ರೂ.4,48,70,233 (ರೂಪಾಯಿ ನಾಲ್ಕು ಕೋಟಿ ನಲವತ್ತೆಂಟು ಲಕ್ಷದ ಎಪ್ಪತ್ತು ಸಾವಿರದ ಎರಡು ನೂರ ಮುವತ್ಮೂರು ಮಾತ್ರ) ಗಳು ಅನುಬಂದದಲ್ಲಿ ಇರುವಂತೆ ಬಾಕಿಇರುತ್ತವೆ. ಈಗೆ ಬಾಕಿ ಇರುವ ಶಾಸನಬದ್ಧ ಕಡಿತಗಳನ್ನು ಪಾವತಿಸಲು ಅನುದಾನವನ್ನು ಲೆಕ್ಕ ಶೀರ್ಷಿಕೆ 2215-01-102-9-08 ಅಡಿ ರಾಜ್ಯದ ಪಾಲಾಗಿ 05 ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗಗಳಿಗೆ ಬಿಡುಗಡೆ ಮಾಡಲು ತೀರ್ಮಾನಿಸಲಾಗಿರುತ್ತದೆ. ಆದ್ದರಿಂದ, ಈ ಕೆಳಕಂಡ ಆದೇಶ.

### ಸರ್ಕಾರದ ಆದೇಶ ಸಂ.ಗ್ರಾಅಪ/203/ಗ್ರಾಕುನೀ&ನೈಇ/2015, ಬೆಂಗಳೂರು, ದಿನಾಂಕ 15-03-2017

ಪೀಠಿಕೆಯಲ್ಲಿನ ವಾಸ್ತವಾಂಶಗಳ ಹಿನ್ನೆಲೆಯಲ್ಲಿ 2009 ರಿಂದ ಬಾಕಿ ಇರುವ ಶಾಸನಬದ್ಧ ಕಡಿತಗಳನ್ನು 2016-17ನೇ ಸಾಲಿನಲ್ಲಿ ಒಟ್ಟು ರೂ.4,48,70,233 (ರೂಪಾಯಿ ನಾಲ್ಕು ಕೋಟಿ ನಲವತ್ತೆಂಟು ಲಕ್ಷದ ಎಪ್ಪತ್ತು ಸಾವಿರದ ಎರಡು ನೂರ ಮುವತ್ಮೂರು ಮಾತ್ರ) ಅನುದಾನವನ್ನು ಲೆಕ್ಕ ಶೀರ್ಷಿಕೆ 2215-01-102-9-08 ಅಡಿ ಬಾಗಲಕೋಟೆ, ಬೆಳಗಾಂ, ಬೀದರ್, ಬಿಜಾಪುರ, ಕಲ್ಬುರ್ಗಿ (ಗುಲ್ಬರ್ಗ) ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗಗಳಿಗೆ ಆದೇಶದ ಅನುಬಂಧದಲ್ಲಿ ಇರುವಂತೆ ಖಜಾನೆ ಮೂಲಕ ಬಿಡುಗಡೆ ಮಾಡಲು ಸರ್ಕಾರವು ತಿರ್ಮಾನಿಸಿದೆ.

2. ಈ ಆದೇಶದಲ್ಲಿ ಬಿಡುಗಡೆಯಾದ ಅನುದಾನವನ್ನು ಲೆಕ್ಕ ಶೀರ್ಷಿಕೆ 2215-01-102-9-08 ಸಾಮಾನ್ಯ ಅಡಿ ಬಿಲ್ಲುಗಳನ್ನು ಖಜಾನೆಯಿಂದ ಸೆಳೆಯುವಾಗ ರಾಜ್ಯ ವಲಯದಡಿ ಬಿಳಿ ಬಣ್ಣದ ಸವಿವರ ಸಾದಿಲ್ವಾರು ಬಿಲ್ಲುಗಳ ಮುಖಾಂತರ ಸೆಳೆಯತಕ್ಕದ್ದು.

3. ಈ ಆದೇಶದಲ್ಲಿ ಬಿಡುಗಡೆಯಾದ ಅನುದಾನವನ್ನು ಖಜಾನೆಯಿಂದ ಹಣ ಸೆಳೆಯುವಾಗ ಕರ್ನಾಟಕ ಪಾರದರ್ಶಕ ಕಾಯ್ದೆ-1999 ಮತ್ತು ಕರ್ನಾಟಕ ಪಾರದರ್ಶಕ ನಿಯಮಗಳು-2000, ಕರ್ನಾಟಕ ಆರ್ಥಿಕ ಸಂಹಿತೆ-1958, ಕರ್ನಾಟಕ ಖಜಾನೆ ಸಂಹಿತೆ, ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, ಪಿಡ್ಲ್ಯುಡಿ "ಎ" ಕೋಡ್ ಮತ್ತು "ಡಿ" ಕೋಡ್ ಹಾಗೂ ಚಾಲ್ತಿ ಇರುವ ಇಲಾಖಾ ಇತರೆ ಸುತ್ತೋಲೆ, ಆದೇಶ ಹಾಗೂ ನಿಯಮಗಳು / ಕಾಯ್ದೆಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.

4. ಈ ಆದೇಶದಲ್ಲಿ ಬಿಡುಗಡೆಯಾದ ಅನುದಾನವನ್ನು ಖಜಾನೆಯಿಂದ ಹಣ ಸೆಳೆಯುವಾಗ ಮುಖ್ಯ ಲೆಕ್ಕಾಧಿಕಾರಿಗಳು, ಜಿಲ್ಲಾ ಪಂಚಾಯತ್ ಇವರು ಬಿಲ್ಲುಗಳಿಗೆ ಮೇಲುರುಜು ಮಾಡತಕ್ಕದ್ದು.

ಸರ್ಕಾರದ ಉಪ ಕಾರ್ಯದರ್ಶಿ (ಗ್ರಾನೀಸ)
ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ

5. ಈ ಆದೇಶದಲ್ಲಿ ಬಿಡುಗಡೆಯಾದ ಅನುದಾನಕ್ಕೆದುರಾಗಿ ಮಾಡಿದ ವೆಚ್ಚದ ವಿವರ ಹಾಗೂ ಲೆಕ್ಕಪತ್ರಗಳನ್ನು ಸಂಬಂಧಿಸಿದ ಗ್ರಾಮೀಣ ಕುಡಿಯುವ ನೀರು ವಿಭಾಗದವರು ಜಿಲ್ಲಾ ಪಂಚಾಯತ್ ಮುಖಾಂತರ ಪ್ರತೀ ತಿಂಗಳು 10ನೇ ತಾರೀಖಿನೊಳಗಾಗಿ ಕೇಂದ್ರ ಕಛೇರಿಗೆ ಸಲ್ಲಿಸತಕ್ಕದ್ದು.

6. ಈ ಆದೇಶದಲ್ಲಿ ಬಿಡುಗಡೆಯಾದ ಅನುದಾನದಡಿಯ ವೆಚ್ಚದ ಬಿಲ್ಲುಗಳನ್ನು ಇಲಾಖೆಯ ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಕಡ್ಡಾಯವಾಗಿ ದಾಖಲಿಸತಕ್ಕದ್ದು ಮತ್ತು ಸದರಿ ತಂತ್ರಾಂಶದಲ್ಲಿ ಸೃಜಿಸಿದ ಕಾರ್ಯಪಾಲಕ ಅಭಿಯಂತರರು ಮತ್ತು ಲೆಕ್ಕ ಅಧೀಕ್ಷಕರ ಸಹಿಯೊಳಗೊಂಡ ಪಾವತಿ ನಮೂನೆಯನ್ನು ಬಿಲ್ಲಿನೊಂದಿಗೆ ಖಜಾನೆಯಲ್ಲಿ ಸಲ್ಲಿಸತಕ್ಕದ್ದು ಹಾಗೂ ಜಿಲ್ಲಾ / ಉಪ ಖಜಾನಾಧಿಕಾರಿಗಳು ಸದರಿ ಗಾಂಧಿ ಸಾಕ್ಷಿ ಕಾಯಕ ಪಾವತಿ ನಮೂನೆ ಹೊಂದಿರುವ ಬಿಲ್ಲುಗಳನ್ನು ಮಾತ್ರ ಮಾನ್ಯ ಮಾಡತಕ್ಕದ್ದು.

7. ಮುಖ್ಯ ಲೆಕ್ಕಾಧಿಕಾರಿಗಳು, ಗ್ರಾ.ಕು.ನೀ.&.ನೈ. ಇಲಾಖೆ ಪ್ರಸ್ತುತ ಬಿಡುಗಡೆ ಮಾಡುತ್ತಿರುವ ಅನುದಾನವನ್ನು IMIS ನಲ್ಲಿ ಇಂದೀಕರಿಸತಕ್ಕದ್ದು.

8. ಈ ಆದೇಶದಲ್ಲಿ ಬಿಡುಗಡೆ ಮಾಡಲಾದ ಅನುದಾನವನ್ನು ಯಾವುದೇ ಕಾರಣದಲ್ಲೂ ಇತರೆ ಘಟಕದಡಿ ವರ್ಗಾಯಿಸಿ ಉಪಯೋಗಿಸಿಕೊಳ್ಳದಂತೆ ಕ್ರಮ ವಹಿಸತಕ್ಕದ್ದು. 2009–10 ರಿಂದ 2014–15ರ ವರೆಗೆ ಬಾಕಿ ಇರುವ ಶಾಸನಬದ್ಧ ಕಡಿತಗಳನ್ನು ಪಾವತಿಮಾಡಿದ ಬಗ್ಗೆ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಮೇಲುಸ್ತುವಾರಿ ಮಾಡಿ ಕಾಲಕಾಲಕ್ಕೆ ವರದಿ ಮಾಡತಕ್ಕದ್ದು.

9. ಮೇಲ್ಕಂಡ ಅನುದಾನವನ್ನು 2009–10 ರಿಂದ 2014–15ರ ವರೆಗೆ ಬಾಕಿ ಇರುವ ಶಾಸನಬದ್ಧ ಕಡಿತಗಳನ್ನು ಪಾವತಿ ಮಾಡಲು ಮಾತ್ರ ಬಳಸತಕ್ಕದ್ದು.

10. ಈ ಆದೇಶವನ್ನು ಸರ್ಕಾರದ ಆರ್ಥಿಕ ಇಲಾಖೆಯ ಸಹಮತಿ ಸಂ.ಆಇ/168/ವೆಚ್ಚ-6/2016, ಬೆಂಗಳೂರು, ದಿನಾಂಕ: 20–10–2016 ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬಿ. ಕೃಷ್ಣಪ್ಪ)
ಸರ್ಕಾರದ ಉಪ ಕಾರ್ಯದರ್ಶಿ (ಗ್ರಾ.ನೀ.ಸ.) (ಪ್ರ)
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ.

<u>ಪ್ರತಿಯನ್ನು :</u>

1. ಮಹಾಲೇಖಪಾಲರು (ಲೆಕ್ಕಪತ್ರ) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು–1) ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಎಯು–2) ಕರ್ನಾಟಕ, ಬೆಂಗಳೂರು.
4. ಉಪ ಮಹಾಲೇಖಪಾಲರು, ಮಹಾಲೇಖಪಾಲರು (ಎಯು–1) ರವರ ಶಾಖಾ ಕಛೇರಿ, ಕಾಲೇಜು ರಸ್ತೆ, ಧಾರವಾಡ.
5. ಮುಖ್ಯ ಇಂಜಿನಿಯರ್, ಗ್ರಾ.ಕು.ನೀ.&.ನೈ. ಇಲಾಖೆ, 1ನೇ ಮಹಡಿ, ಕೆ.ಹೆಚ್.ಬಿ. ಕಟ್ಟಡ, ಕಾವೇರಿಭವನ, ಬೆಂಗಳೂರು.
6. ನಿರ್ದೇಶಕರು, ಖಜಾನೆ ಇಲಾಖೆ, ಪೋಡಿಯಂ ಬ್ಲಾಕ್, ವಿಶ್ವೇಶ್ವರಯ್ಯ ಗೋಪುರ, ಬೆಂಗಳೂರು
7. ಅಧ್ಯಕ್ಷರು, ಜಿಲ್ಲಾ ಪಂಚಾಯತ್, ಬಾಗಲಕೋಟೆ, ಬೆಳಗಾಂ, ಬೀದರ್, ಬಿಜಾಪುರ ಮತ್ತು ಗುಲ್ಬರ್ಗಾ ಜಿಲ್ಲೆ.
8. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಬಾಗಲಕೋಟೆ, ಬೆಳಗಾಂ, ಬೀದರ್, ಬಿಜಾಪುರ ಮತ್ತು ಗುಲ್ಬರ್ಗಾ ಜಿಲ್ಲೆ.
9. ಅಧೀಕ್ಷಕ ಅಭಿಯಂತರರು, ಗ್ರಾ.ಕು.ನೀ.&.ನೈ. ವೃತ್ತ, 4 ವೃತ್ತ.
10. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
11. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
12. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.

13. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಯೋಜನಾ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬೆಂಗಳೂರು.
14. ವಿಶೇಷಾಧಿಕಾರಿ (ಜಿಪಂ) ಹಾಗೂ ಸರ್ಕಾರದ ಪದನಿಮಿತ್ತ ಉಪಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು
15. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ (6) (ಜಿಪಂ) ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
16. ಮುಖ್ಯ ಲೆಕ್ಕಾಧಿಕಾರಿಗಳು, RDW&SD ಕೇಂದ್ರ ಕಛೇರಿ, ಬೆಂಗಳೂರು.
17. ಮುಖ್ಯ ಲೆಕ್ಕಾಧಿಕಾರಿಗಳು, ಜಿಲ್ಲಾ ಪಂಚಾಯತ್, ಬಾಗಲಕೋಟೆ, ಬೆಳಗಾಂ, ಬೀದರ್, ಬಿಜಾಪುರ ಮತ್ತು ಗುಲ್ಬರ್ಗಾ ಜಿಲ್ಲೆ.
18. ಕಾರ್ಯಪಾಲಕ ಅಭಿಯಂತರರು, ಗ್ರಾ.ಕು.ನೀ.&.ನೈ. ವಿಭಾಗ, ಬಾಗಲಕೋಟೆ, ಬೆಳಗಾಂ, ಬೀದರ್, ಬಿಜಾಪುರ ಮತ್ತು ಗುಲ್ಬರ್ಗಾ ಜಿಲ್ಲೆ.
19. ಉಪ ನಿರ್ದೇಶಕರು, ಟಿ.ಎನ್.ಎಂ.ಸಿ., ಖಜಾನೆ ಇಲಾಖೆ, ಖನಿಜ ಭವನ, ಬೆಂಗಳೂರು.
20. ಜಿಲ್ಲಾ ಖಜಾನಾಧಿಕಾರಿಗಳು, ಖಜಾನೆ ಇಲಾಖೆ, ಬಾಗಲಕೋಟೆ, ಬೆಳಗಾಂ, ಬೀದರ್, ಬಿಜಾಪುರ ಮತ್ತು ಗುಲ್ಬರ್ಗಾ ಜಿಲ್ಲೆ.
21. ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ (ಪಂ.ರಾಜ್), ಗ್ರಾ. ಅ. ಮತ್ತು ಪಂ. ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು.
22. ಆಯುಕ್ತರು, RDW&SD ಮತ್ತು ಪದನಿಮಿತ್ತ ಸರ್ಕಾರದ ಕಾರ್ಯದರ್ಶಿ ಇವರ ಆಪ್ತ ಸಹಾಯಕರಿಗೆ.
23. ಆಂತರಿಕ ಆರ್ಥಿಕ ಸಲಹೆಗಾರರು, RDPR ಇಲಾಖೆ ಇವರ ಆಪ್ತ ಸಹಾಯಕರು.
24. ಮುಖ್ಯ ಸಂಪಾದಕರು ಮತ್ತು ಸಂಪರ್ಕಾಧಿಕಾರಿ "ಕರ್ನಾಟಕ ವಿಕಾಸ" ಗ್ರಾ.ಅ.ಪಂ.ರಾಜ್ ಇಲಾಖೆ, ಬೆಂಗಳೂರು.
25. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾ.ಅ.&.ಪಂ.ರಾಜ್ ಇಲಾಖೆ (ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು).
26. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ).
27. ಗ್ರಾಅಪಂ.ರಾಜ್ ಇಲಾಖೆಯ ಮಾಹಿತಿ ಕೇಂದ್ರ (10 ಪ್ರತಿಗಳು).
28. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

# ಅನುಬಂಧ

**ಸರ್ಕಾರದ ಆದೇಶ ಸಂ.ಗ್ರಾಅಪ/203/ಗ್ರಾಕುನೀ&ನೈಇ/2015, ಬೆಂಗಳೂರು,**
**ದಿನಾಂಕ 15-03-2017 ರ ಲಗತ್ತು**

**2016-17ನೇ ಸಾಲಿನಲ್ಲಿ ರಾಷ್ಟ್ರೀಯ ಗ್ರಾಮೀಣ ಕುಡಿಯುವ ನೀರು ಯೋಜನೆಯ 2009-10 ರಿಂದ ಬಾಕಿ ಇರುವ ಶಾಸನಬದ್ಧ ಕಡಿತಗಳ ಬಾಕಿ ಪಾವತಿಗಾಗಿ ರಾಜ್ಯ ಸರ್ಕಾರದಿಂದ ಬಿಡುಗಡೆ ಮಾಡಲಾದ ಅನುದಾನ**

| ಕ್ರ.ಸಂ | ಜಿಲ್ಲೆ | ಬಿಡುಗಡೆಮಾಡುತ್ತಿರುವ ಅನುದಾನ | | | | |
|---|---|---|---|---|---|---|
| | | **EMD** | **FSD** | **Income Tax** | **Fine** | **Total** |
| 1 | ಬಾಗಲಕೋಟೆ | 54,825 | 1,50,36,759 | | | 1,50,91,584 |
| 2 | ಬೆಳಗಾಂ | | 1,69,916 | | 4,27,951 | 5,97,867 |
| 3 | ಬೀದರ್ | | 53,65,812 | | | 53,65,812 |
| 4 | ಬಿಜಾಪುರ | | 17,01,869 | 4,88,101 | | 21,89,970 |
| 5 | ಗುಲ್ಬರ್ಗಾ | | 2,16,25,000 | | | 2,16,25,000 |
| ಒಟ್ಟು | | **54,825** | **4,38,99,356** | **4,88,101** | **4,27,951** | **4,48,70,233** |

(ಬಿ. ಕೃಷ್ಣಪ್ಪ)
ಸರ್ಕಾರದ ಉಪ ಕಾರ್ಯದರ್ಶಿ (ಗ್ರಾ.ನೀ.ಸ.) (ಪ್ರ)
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ.